# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**01.01.2025** **6.40 p.m.**

***************

ಮುಖ್ಯಾಂಶಗಳು

- ಅಧಿಕಾರಿಗಳು ಜಾತ್ಯತೀತವಾಗಿ ಮಾನವೀಯ ನೆಲೆಯಲ್ಲಿ ಸಾರ್ವಜನಿಕರಿಗೆ ಸ್ಪಂದಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
- ಬೆಂಗಳೂರಿನ ಕೋಗಿಲು ಬಡಾವಣೆಯಲ್ಲಿ ರಾಜ್ಯದ ನಿವಾಸಿಗಳಿಗೆ ಮಾತ್ರ ವಸತಿ ಹಂಚಿಕೆ- ಸಚಿವ ಜಮೀರ್ ಅಹ್ಮದ್ ಸ್ಪಷ್ಟನೆ
- ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸೇರಿದಂತೆ ಸ್ಥಳೀಯ ಸಂಸ್ಥೆಗಳಿಗೆ ಈ ವರ್ಷವೇ ಚುನಾವಣೆ- ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ನೌಕರರಿಗೆ ಸಾರಿಗೆ ಮಿತ್ರ ಮೊಬೈಲ್ ಆಪ್ ಬಿಡುಗಡೆ
- ಕೋಗಿಲು ಬಡಾವಣೆಯಲ್ಲಿ ಮನೆಗಳ ನೆಲಸಮ ಪ್ರಕರಣ; ಬಿಜೆಪಿಯಿಂದ ಸತ್ಯಶೋಧನಾ ತಂಡ ರಚನೆ

***************

ರಾಜ್ಯದ ಜನತೆಗೆ ಸರ್ಕಾರದ ಸೇವೆಗಳನ್ನು ವಿಳಂಬ ಮಾಡದೆ, ಅಧಿಕಾರಿಗಳು ಜಾತ್ಯತೀತವಾಗಿ ಮಾನವೀಯ ನೆಲೆಯಲ್ಲಿ ಸಾರ್ವಜನಿಕರಿಗೆ ಸ್ಪಂದಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹೊಸ ವರ್ಷದ ಪ್ರಯುಕ್ತ ಸರ್ಕಾರದ ಎಲ್ಲಾ ಹಿರಿಯ ಅಧಿಕಾರಿಗಳಿಗೆ ಶುಭ ಕೋರಿ ಮಾತನಾಡಿದ ಅವರು, ೨೦೨೬ ರಾಜ್ಯಕ್ಕೆ ಸಮೃದ್ಧಿ ತರಲಿ ಎಂದು ಹಾರೈಸಿದ್ದಾರೆ.

ಅಧಿಕಾರಿಗಳು ಹೆಚ್ಚಿನ ಉತ್ಸಾಹದಿಂದ ಕಾರ್ಯ ನಿರ್ವಹಿಸಬೇಕು. ಸಮಾಜದ ವಂಚಿತರಿಗೆ ನ್ಯಾಯ ಒದಗಿಸಬೇಕು ಎಂದು ಕರೆ ನೀಡಿದ್ದಾರೆ.

೨೦೨೫ ರಲ್ಲಿ ಖುಷ್ಕಿ, ನೀರಾವರಿ ಸೇರಿದಂತೆ ಬೆಳೆಗೆ ಪ್ರತಿ ಹೆಕ್ಟೇರ್‌ಗೆ ೮ ಸಾವಿರದ ೫೦೦ ರೂಪಾಯಿ ಪರಿಹಾರ ನೀಡಲಾಗಿದ್ದು, ತುಸು ನೆಮ್ಮದಿ ಕಾಣುವಂತಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

***************

ಅಹಿತಕರ ಘಟನೆಗಳಿಗೆ ಆಸ್ಪದ ನೀಡದೆ, ಸುರಕ್ಷಿತವಾಗಿ ಹಾಗೂ ಅದ್ದೂರಿಯಾಗಿ ಹೊಸ ವರ್ಷವನ್ನು ಬರಮಾಡಿಕೊಳ್ಳಲು ನಮ್ಮ ಪೊಲೀಸರು ತೋರಿದ ಶಿಸ್ತು, ಸಮರ್ಪಣೆ ಮತ್ತು ಅವಿಶ್ರಾಂತ ಪ್ರಯತ್ನಗಳು ಶ್ಲಾಘನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ಪೊಲೀಸರ ವೃತ್ತಿಪರತೆ ಮತ್ತು ಸಾರ್ವಜನಿಕರ ಸುರಕ್ಷತೆಯೆಡೆಗಿನ ಬದ್ಧತೆಯು ನೈಜ ಸೇವಾ ಮನೋಭಾವದ ದ್ಯೋತಕವಾಗಿದೆ. ಪ್ರತಿಯೊಬ್ಬ ಪೊಲೀಸ್ ಸಿಬ್ಬಂದಿ ಮತ್ತು ಅವರ ಕುಟುಂಬಕ್ಕೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದ್ದಾರೆ.

***************

ಬೆಂಗಳೂರಿನ ಕೋಗಿಲು ಬಡಾವಣೆಯ ಸಂತ್ರಸ್ತರು ಬಾಂಗ್ಲಾ ಪ್ರಜೆಗಳು ಎಂದು ವಿರೋಧ ಪಕ್ಷದ ನಾಯಕರು ಸಾಬೀತುಪಡಿಸಲಿ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ಸವಾಲು ಹಾಕಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊರಗಿನವರಿಗೆ ವಸತಿ ಹಂಚಿಕೆಯ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಜಿಲ್ಲಾಧಿಕಾರಿ ಮತ್ತು ತಹಶೀಲ್ದಾರ್ ಪ್ರತಿಯೊಬ್ಬ ವ್ಯಕ್ತಿಯ ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ. ಕೋಗಿಲು ಲೇಔಟ್‌ನಲ್ಲಿ ೨೫೪ ಮನೆಗಳಿದ್ದು, ಅವುಗಳಲ್ಲಿ ೧೬೭ ಮನೆಗಳನ್ನು ಕೆಡವಲಾಗಿದೆ ಎಂದು ತಿಳಿಸಿದ್ದಾರೆ.

ಫಲಾನುಭವಿಗಳು ರಾಜ್ಯದ ನಿವಾಸಿಗಳಾಗಿರಬೇಕು ಮತ್ತು ಬಿಪಿಎಲ್ ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

***************

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮಹಾನಗರ ಪಾಲಿಕೆಗಳು ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಯ ಚುನಾವಣೆಗಳನ್ನು ಈ ವರ್ಷವೇ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಹಾಗೂ ಬೆಂಗಳೂರಿನ ಉತ್ತರ ಭಾಗದ ಜನರ ಸುಗಮ ವಾಹನ ಸಂಚಾರಕ್ಕಾಗಿ ಹೆಬ್ಬಾಳ ಮೇಲ್ಸೇತುವೆ ಎರಡನೇ ಲೂಪ್ ಇಂದು ಉದ್ಘಾಟಿಸಲಾಗಿದೆ ಎಂದು ಹೇಳಿದ್ದಾರೆ.

ಮುಂದಿನ ದಿನಗಳಲ್ಲಿ ಈ ಭಾಗದಲ್ಲಿ ಒಂದೂವರೆ ಕಿಲೋಮೀಟರ್ ಸುರಂಗ ರಸ್ತೆ ಬರಲಿದೆ. ಮೇಕ್ರಿ ವೃತ್ತದ ಬಳಿ ಮೇಲ್ಸೇತುವೆ ಸಾಗಲಿದೆ. ತುಮಕೂರು ರಸ್ತೆಯಿಂದ ಕೆ.ಆರ್ ಪುರದ ವರೆಗೆ ಮೇಲ್ಸೇತುವೆ ಮೂಲಕ ಹೊರ ವರ್ತುಲ ರಸ್ತೆ ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು, ಸಾರಿಗೆ ಮಿತ್ರ ಎಚ್.ಆರ್.ಎಂ.ಎಸ್ ಮೊಬೈಲ್ ಆಪ್ ಬಿಡುಗಡೆ ಮಾಡಿದೆ. ನೌಕರರಿಗೆ ತ್ವರಿತ ಸಮಯದಲ್ಲಿ ಮಾನವ ಸಂಪನ್ಮೂಲ ಸೇವೆಗಳನ್ನು ಸ್ಮಾರ್ಟ್‌ಫೋನ್ ಮೂಲಕ ಒದಗಿಸುವ ಉದ್ದೇಶದಿಂದ ಈ ಆಪ್ ಅನ್ನು ಅಭಿವೃದ್ಧಿಪಡಿಸಲಾಗಿದೆ.

ಈ ಆಪ್‌ನಲ್ಲಿ ಜಿಯೋ ಫೆನ್ಸಿಂಗ್ ಆಧಾರಿತ ಹಾಜರಾತಿ ವ್ಯವಸ್ಥೆ, ವೈಯಕ್ತಿಕ ವಿವರಗಳು, ಸೇವಾ ದಾಖಲಾತಿ, ಮಾಸಿಕ ವೇತನ ಪಟ್ಟಿಯನ್ನು ಡೌನ್ ಮಾಡಿಕೊಳ್ಳಬಹುದು.

ರಜೆ ನಿರ್ವಹಣೆ ವ್ಯವಸ್ಥೆಯ ಮೂಲಕ ಖಾತೆಯಲ್ಲಿರುವ ರಜೆಗಳ ವಿವರಗಳ ಪರಿಶೀಲನೆ ನಡೆಸಬಹುದು ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ.

ಇದೇ ವೇಳೆ, ಸರ್ಕಾರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಇತರೆ ನಿಗಮಗಳ ದರ್ಜೆ-೩ ಮೇಲ್ವಿಚಾರಕೇತರ ಮತ್ತು ದರ್ಜೆ-೪ ರ ನೌಕರರಿಗೆ ಅಂತರ ನಿಗಮ ವರ್ಗಾವಣೆಗೆ ಅವಕಾಶ ಕಲ್ಪಿಸಿದೆ.

***************

ಬೆಂಗಳೂರಿನ ಯಲಹಂಕದ ಕೋಗಿಲು ಲೇಔಟ್ ಬಳಿಯಿರುವ ಫಕೀರ್ ಕಾಲೋನಿ ಮತ್ತು ನಸೀಮ್ ಬಡಾವಣೆಯಲ್ಲಿ ಮನೆ- ಗುಡಿಸಲುಗಳ ನೆಲಸಮ ಕುರಿತ ಸತ್ಯಾಸತ್ಯತೆಯನ್ನು ತಿಳಿಯಲು ರಾಜ್ಯ ಬಿಜೆಪಿ ವತಿಯಿಂದ ಸತ್ಯಶೋಧನಾ ತಂಡ ರಚಿಸಲಾಗಿದೆ. ಈ ತಂಡವು ಇಂದು ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಸಭೆ ನಡೆಸಿತು.

ಸ್ವಂತ ನಿವೇಶನವಿಲ್ಲದೇ ಅರ್ಜಿ ಹಾಕಿ ಕಾಯುತ್ತಿರುವ ರಾಜ್ಯದ ಲಕ್ಷಾಂತರ ಬಡವರಿಗೆ ನೆರವಾಗಬೇಕಿದ್ದ ಕಾಂಗ್ರೆಸ್ ಸರ್ಕಾರ, ಓಲೈಕೆ ರಾಜಕಾರಣಕ್ಕಾಗಿ ಹೊರರಾಜ್ಯದವರಿಗೆ ಮಣೆಹಾಕುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಅವರು, ಸರ್ಕಾರ ಪರಿಶಿಷ್ಟರು, ಹಿಂದುಳಿದ ವರ್ಗಗಳ ಬಡ ಕುಟುಂಬದವರಿಗೆ ನೆರವಾಗಿಲ್ಲ. ಕರ್ನಾಟಕದ ನೆಲವನ್ನು ಅಕ್ರಮವಾಗಿ ಒತ್ತು ಮಾಡಿಕೊಂಡಿದ್ದ ವಲಸಿಗರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಬದಲಾಗಿ ಹೈಕಮಾಂಡ್ ಆದೇಶಕ್ಕೆ ಮಂಡಿಯೂರಿದೆ ಎಂದು ಆರೋಪಿಸಿದ್ದಾರೆ.

***************

ರಸ್ತೆ ಅಪಘಾತ ಪ್ರಮಾಣವನ್ನು ಕಡಿಮೆ ಮಾಡುವುದು ಅಥವಾ ಅಪಘಾತವಾಗದಂತೆ ಎಚ್ಚರ ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಶಿಧರ ಶೆಟ್ಟಿ ತಿಳಿಸಿದ್ದಾರೆ.

ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಭಾಂಗಣದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದ್ದಾರೆ.

ಇಂದಿನಿಂದ ಇದೇ ೩೧ ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ. ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ ಹಾಗೂ ಖಾಸಗಿ ಬಸ್‌ಗಳ ಚಾಲಕರಿಗೆ ಮತ್ತು ನಿರ್ವಾಹಕರಿಗೆ ಬಸ್ ಚಾಲನೆ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಬೇಕು ಎಂದು ಸೂಚನೆ ನೀಡಿದ್ದಾರೆ.

***************

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆ, ಅನ್ನ ಭಾಗ್ಯ, ಗೃಹ ಲಕ್ಷ್ಮೀ, ಗೃಹ ಜ್ಯೋತಿ ಹಾಗೂ ಯುವ ನಿಧಿ ಯೋಜನೆಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿವೆ ಎಂದು ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ ತಿಳಿಸಿದ್ದಾರೆ.

ಹುಬ್ಬಳ್ಳಿಯ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವದಡಿ ಸರ್ಕಾರ ಕಾರ್ಯನಿರ್ವಸುತ್ತಿದೆ. ಶಕ್ತಿ ಯೋಜನೆ ಮೂಲಕ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಮುಂದಿನ ವರ್ಷಗಳಲ್ಲಿಯೂ ಯೋಜನೆಗಳನ್ನು ಯಶಸ್ವಿಯಾಗಿ ಮುಂದುವರಿಸಲಾಗುವುದು ಎಂದು ಹೇಳಿದ್ದಾರೆ.

***************

ಭಾರತೀಯ ಕೃಷಿ ಸಂಶೋಧನಾ ಪರಿಷತ್ - ಕೇಂದ್ರ ಸಾಗರ ಮೀನುಗಾರಿಕೆ ಸಂಶೋಧನಾ ಸಂಸ್ಥೆ, ಕಾರವಾರ ಪ್ರಾದೇಶಿಕ ಕೇಂದ್ರದ ವತಿಯಿಂದ ಅಲಿಗದ್ದಾ ಕಡಲತೀರದಲ್ಲಿ ಕರಾವಳಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಅಲಿಗದ್ದಾ ಕಡಲತೀರವನ್ನು ಪ್ಲಾಸ್ಟಿಕ್ ಮಾಲಿನ್ಯ, ಮತ್ತು ಮಾನವ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿ, ಸ್ವಚ್ಛಗೊಳಿಸಲಾಯಿತು.

ಒಟ್ಟು ೧೨೦ ಕೆಜಿ ಸಮುದ್ರ ಕಸ ಹಾಗೂ ಹರಿದ ಮೀನುಗಾರಿಕಾ ಬಲೆಗಳನ್ನು ಕಡಲತೀರದಿಂದ ತೆಗೆಯಲಾಯಿತು.

***************

ಹೊಸ ವರ್ಷದ ಪ್ರಯುಕ್ತ ತೋಟಗಾರಿಕೆ ಇಲಾಖೆ ವತಿಯಿಂದ ವಿಧಾನಸೌಧದ ಆವರಣದಲ್ಲಿರುವ ಕೈತೋಟದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಸಿ ನೆಟ್ಟರು. ಇದೇ ವೇಳೆ, ರಾಜ್ಯದ ಜನತೆಗೆ ಹೊಸ ವರ್ಷದ ಶುಭಾಶಯ ಕೋರಿದರು.

ಈ ಸಂಧರ್ಭದಲ್ಲಿ, ವಿಧಾನ ಪರಿಷತ್ ಶಾಸಕರಾದ ರಮೇಶ್ ಬಾಬು, ವಿಧಾನ ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

***************

ಉಡುಪಿಯಲ್ಲಿ ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆ ನಿರ್ಮಾಣ ಕಾಮಗಾರಿಯ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕುಡಿಯುವ ನೀರು ಸರಬರಾಜಿನ ಪೈಪ್‌ಲೈನ್ ಹಾನಿಗೊಳಗಾಗಿದೆ. ದುರಸ್ಥಿ ಹಾಗೂ ಮರುಅಳವಡಿಕೆ ಕಾರ್ಯವನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳಬೇಕೆಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಆಗ್ರಹಿಸಿದ್ದಾರೆ.

ಅಗಲೀಕರಣ ಕಾಮಗಾರಿಯಿಂದ ಮುಂಬರುವ ದಿನಗಳಲ್ಲಿ ಪೈಪ್‌ಲೈನ್ ಹಾನಿಗೊಳಗಾಗುವ ಸಾಧ್ಯತೆಗಳಿವೆ ಎಂದು ತಿಳಿಸಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಜಕಣಾಚಾರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ವಾಸ್ತು ಶಿಲ್ಪದ ಹರಿಕಾರ ಎಂದೇ ಪ್ರಸಿದ್ಧಿ ಪಡೆದಿರುವ ವಿಶ್ವಕರ್ಮ ಜಕಣಾಚಾರಿ ಅವರ ಬೇಲೂರು ಚನ್ನಕೇಶವ, ಹಳೇಬೀಡು ಸೋಮನಾಥೇಶ್ವರ ದೇವಾಲಯಗಳ ವಾಸ್ತು ಶಿಲ್ಪ ಕಲೆಯು ವಿಶ್ವ ಪಾರಂಪರಿಕ ತಾಣಗಳ ಮಾನ್ಯತೆ ಪಡೆದಿದೆ ಎಂದು ತಿಳಿಸಿದರು.

*******ಮುಕ್ತಾಯ*******